# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 2725
ಸದಸ್ಯರ ಹೆಸರು : ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 28-03-2022
ಉತ್ತರಿಸುವ ಸಚಿವರು : ಮಾನ್ಯ ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅರಣ್ಯ ಹಕ್ಕು ಕಾಯಿದ 2005 ರ ಪ್ರಕಾರ ಅರಣ್ಯ ಭೂಮಿಯನ್ನು ಉಳುಮೆ ಮಾಡುತ್ತಿರುವ ರೈತರನ್ನು ತೆರವುಗೊಳಿಸಬಾರದೆಂದು ಸರ್ಕಾರದ ಆದೇಶ ವಿದ್ದರೂ ತೆರವುಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ (ಅರಣ್ಯ ಹಕ್ಕುಗಳನ್ನು ಮಾನ್ಯ ಮಾಡುವ) ಅಧಿನಿಯಮ 2006 ಮತ್ತು ನಿಯಮಗಳು 2008 (ನಿಯಮಗಳ ತಿದ್ದುಪಡಿ 2012) ರನ್ವಯ ತಿರಸ್ಕೃತಗೊಂಡ ಅರ್ಜಿಗಳನ್ನು ಹೊರತುಪಡಿಸಿ ಹಕ್ಕು ಪತ್ರ ನೀಡಿರುವ ಅರ್ಜಿಗಳು ಬಾಕಿ ಇರುವ ಅರ್ಜಿಗಳು ಹಾಗೂ ಮರು ಪರಿಶೀಲನೆಗೆ ಸಲ್ಲಿಸಿರುವ ಅರ್ಜಿಗಳನ್ನು ತೆರವುಗೊಳಿಸಲಾಗುತ್ತಿಲ್ಲ. |
| ಆ) | ಗದಗ ಜಿಲ್ಲೆ ಮುಂಡರಗಿ ತಾಲ್ಲೂಕು ಕೆರೂರು ಗ್ರಾಮದಲ್ಲಿ ರೈತರು ಬೆಳೆದ ಬೆಳೆಯನ್ನು ಹಾನಿಮಾಡಿ ಜಮೀನಿನಿಂದ ತೆರವುಗೊಳಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಗದಗ ಜಿಲ್ಲೆ ಮುಂಡರಗಿ ತಾಲ್ಲೂಕು ಕೆರೂರು ಗ್ರಾಮದಲ್ಲಿ ರೈತರು ಮಾಡಿದ ಅರಣ್ಯ ಅತಿಕ್ರಮಣ ಜಮೀನು ತೆರವುಗೊಳಿಸುವ ಸಮಯದಲ್ಲಿ ಯಾವುದೇ ಬೆಳೆ ಬೆಳೆದಿರುವುದಿಲ್ಲ. |
| ಇ) | ರೈತರು ಬೆಳೆದ ಬೆಳೆಯನ್ನು ಹಾನಿ ಮಾಡಿ ತೆರವುಗೊಳಿಸಿದಾಗ ಸಂಕಷ್ಟದಲ್ಲಿದ್ದ ರೈತ ಕುಟುಂಬದ ಇಬ್ಬರು ಮಹಿಳೆಯರು ವಿಷ ಸೇವಿಸಿದ್ದು ಈ ಪೈಕಿ ಒಬ್ಬರು ಮೃತಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಅರಣ್ಯ ಅತಿಕ್ರಮಣ ತೆರವುಗೊಳಿಸುವ ಸಮಯದಲ್ಲಿ ಅರಣ್ಯ ಇಲಾಖೆಯು ಒತ್ತುವರಿ ತೆರವು ಮಾಡಿದ ಅರಣ್ಯ ಭೂಮಿಗೆ ಪ್ರವೇಶಿಸುವುದನ್ನು ವಿರೋಧಿಸಿದ 6-7 ಮಹಿಳೆಯರು ಕೀಟನಾಶಕ ಕುಡಿಯುವುದಾಗಿ ಬೆದರಿಕೆ ಹಾಕಿದರು. ಇಬ್ಬರು ಮಹಿಳೆಯರ ಕೈಯಲ್ಲಿ ಕೀಟನಾಶಕವಿದ್ದು ಅದನ್ನು ಸೇವಿಸಲು ಯತ್ನಿಸಿದ್ದಾರೆ. ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿಗಳು, ಗದಗ ಉಪವಿಭಾಗ ಹಾಗೂ ಅರಣ್ಯ ಸಿಬ್ಬಂದಿಯವರು ಅವರನ್ನು ಆಸ್ಪತ್ರೆಗೆ ಕರೆದೊಯ್ಯಲು ಪ್ರಯತ್ನಿಸಿದರು. ಆದರೆ ಇತರೆ ಮಹಿಳೆಯರು ತಡೆದರು ಮತ್ತು ಆ ಇಬ್ಬರು ಮಹಿಳೆಯರು ಸ್ಥಳದಲ್ಲೇ ಸಾಯಬೇಕು ಎಂದು ಹೇಳಿದರು. ಮಹಿಳಾ ಅರಣ್ಯ ಸಿಬ್ಬಂದಿಗಳು ಬಹಳ ಕಷ್ಟಪಟ್ಟು ಮಾತುಕತೆ ನಡೆಸಿದರೂ, ಸ್ಥಳದಲ್ಲಿದ್ದ ಮಹಿಳೆಯರು ಆಸ್ಪತ್ರೆಗೆ ಹೋಗಲು ಬಿಡಲಿಲ್ಲ. ರೈತ ಕುಟುಂಬದ ಇಬ್ಬರು ಮಹಿಳೆಯರು |

| | | |
|---|---|---|
| | | ವಿಷ ಸೇವಿಸಿದ್ದು, ಈ ಪೈಕಿ ಒಬ್ಬರು ಮೃತಪಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. |
| ಈ) | ಬಂದಿದ್ದಲ್ಲಿ, ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಅರಣ್ಯ ಹಕ್ಕು ಕಾಯಿದೆ 2005 ರ ಅನ್ವಯ ರೈತರಿಗೆ ಭೂಮಿ ಮಂಜೂರು ಮಾಡದಿರಲು ಕಾರಣಗಳೇನು? | 1. ಅರಣ್ಯ ಹಕ್ಕು ಕಾಯ್ದೆ 2006ರನ್ವಯ ಯಾವುದೇ ರೈತರು ಅರ್ಜಿಯನ್ನು ಸಲ್ಲಿಸಿರುವುದಿಲ್ಲ,<br>2. 2003ರಲ್ಲಿ ಅರಣ್ಯ ಅತಿಕ್ರಮಣ ಮಾಡಿದ ಭೂಮಿಯನ್ನು ಕರ್ನಾಟಕ ಅರಣ್ಯ ಕಾಯ್ದೆ 1963 ಕಲಂ 64–ಎ ಪ್ರಕಾರ ಅಂತಿಮ ಆದೇಶ ಮಾಡಿ ತೆರವುಗೊಳಿಸಲಾಗಿರುತ್ತದೆ.<br>3. ಇದುವರೆಗೂ ಸದರಿ ಅರಣ್ಯ ಭೂಮಿಯು ಇಲಾಖಾ ವಶದಲ್ಲಿದ್ದು, ಮತ್ತೆ ಅವರು 2022ರ ಜನವರಿಯಲ್ಲಿ ಅತಿಕ್ರಮಣ ಮಾಡುತ್ತಿರುವಾಗ ತೆರವು ಕಾರ್ಯಾಚರಣೆಯನ್ನು ಮಾಡಲಾಗಿರುತ್ತದೆ.<br>ಈ ಹಿನ್ನೆಲೆಯಲ್ಲಿ ರೈತರಿಗೆ ಅರಣ್ಯ - ಭೂಮಿ ಮಂಜೂರು ಮಾಡುವ ಪ್ರಶ್ನೆ ಉದ್ಭವಿಸುವುದಿಲ್ಲ. |

**ಸಂಖ್ಯೆ: ಅಪಜೀ 51 ಎಫ್‌ಎಲ್‌ಎಲ್ 2022 (ಇ)**

(ಉಮೇಶ ವಿ. ಕತ್ತಿ)
ಅರಣ್ಯ ಹಾಗೂ ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು